# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 596(693) |
| ಸದಸ್ಯರ ಹೆಸರು | : | ಡಾ: ಎಂ.ಜಿ.ಮುಳೆ(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಡಿ-ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಶಾಲೆಗಳಿಗೆ ಈ ಹುದ್ದೆಗಳು ಮಂಜೂರಾಗಿಲ್ಲ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದ ಯಾವುದೇ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಗ್ರೂಪ್-ಡಿ ಹುದ್ದೆಗಳು ಮಂಜೂರಾಗಿರುವುದಿಲ್ಲ.<br><br>ಡಿ-ಗ್ರೂಪ್ ನೌಕರರ ಕೊರತೆಯಿಂದಾಗಿ ಶಾಲಾ ಆವರಣದ ಸ್ವಚ್ಛತೆ, ಶೌಚಾಲಯಗಳ ನಿರ್ವಹಣೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯಲ್ಲಿ ಉಂಟಾಗುತ್ತಿರುವ ಗಂಭೀರ ಸಮಸ್ಯೆಗಳ ಕುರಿತು ಯಾವುದೇ ವರದಿ ಸಲ್ಲಿಕೆಯಾಗಿರುವುದಿಲ್ಲ. |
| ಆ) | ಡಿ-ಗ್ರೂಪ್ ನೌಕರರ ಕೊರತೆಯಿಂದಾಗಿ ಶಾಲಾ ಆವರಣದ ಸ್ವಚ್ಛತೆ, ಶೌಚಾಲಯಗಳ ನಿರ್ವಹಣೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯಲ್ಲಿ ಉಂಟಾಗುತ್ತಿರುವ ಗಂಭೀರ ಸಮಸ್ಯೆಗಳ ಕುರಿತು ಇಲಾಖೆಗೆ ವರದಿ ಸಲ್ಲಿಕೆಯಾಗಿದೆಯೇ; | |
| ಇ) | ಪ್ರಸ್ತುತ ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರು ಆಗಿರುವ ಡಿ-ಗ್ರೂಪ್ ಹುದ್ದೆಗಳೆಷ್ಟು ಮತ್ತು ಅದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | |
| ಈ) | ಶಾಲಾ ನಿರ್ವಹಣೆಯ ಹಿತದೃಷ್ಟಿಯಿಂದ ಹೊಸದಾಗಿ ಡಿ-ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡಲು ಅಥವಾ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಸರ್ಕಾರದ ಸ್ಪಷ್ಟ ನಿಲುವೇನು; | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಡಿ-ಗ್ರೂಪ್ ಹುದ್ದೆಗಳು ಮಂಜೂರಾಗಿರುವುದಿಲ್ಲ.<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 626 ಪಿಬಿಎಸ್ 2014 ದಿನಾಂಕ:19.05.2017 ರಲ್ಲಿ 2017-18 ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಪ್ರಾಥಮಿಕ ಶಾಲೆಗಳಿಗೆ ಮಂಜೂರಾದ ವಿವಿಧ ವೃಂದ ಬಲವನ್ನು ನಿಗದಿಪಡಿಸಲಾಗಿದ್ದು, ಅದರಲ್ಲಿ ಡಿ-ಗ್ರೂಪ್ ನೌಕರರ ಹುದ್ದೆ ಸೇರ್ಪಡೆಯಾಗಿರುವುದಿಲ್ಲ.<br><br>ಈ ಹಿನ್ನೆಲೆಯಲ್ಲಿ ಸರ್ಕಾರಿ ಕಿರಿಯ/ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಡಿ-ಗ್ರೂಪ್ ನೌಕರರ ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ |

| | | |
|---|---|---|
| | | ಮುಂದಿರುವುದಿಲ್ಲ. |
| ಉ) | ಖಾಯಂ ನೇಮಕಾತಿಯಾಗುವವರೆಗೆ, ಹೊರಗುತ್ತಿಗೆ (Outsourcing) ಅಥವಾ ಸ್ಥಳೀಯ ಸಂಸ್ಥೆಗಳ (ಗ್ರಾಮ ಪಂಚಾಯತ್/ನಗರ ಸಭೆ) ಮೂಲಕ ಸ್ವಚ್ಛತಾ ಕಾರ್ಯಕರ್ತರನ್ನು ನಿಯೋಜಿಸಲು ಸರ್ಕಾರ ಯೋಜಿಸಿದೆಯೇ; | ಇಲ್ಲ |
| ಊ) | ಮುಂದಿನ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿಗಳ ಆರೋಗ್ಯ ಮತ್ತು ಶಾಲೆಗಳ ಶಿಸ್ತಿನ ದೃಷ್ಟಿಯಿಂದ ಹೊಸದಾಗಿ ಡಿ-ಗ್ರೂಪ್ ಹುದ್ದೆಗಳನ್ನು ಸೃಷ್ಟಿಸಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಇಲ್ಲ |

ಸಂಖ್ಯೆ:ಇಪಿ 89 ಎಸ್‌ಟಿಬಿ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.